# Akashvani : Bangalore
# Regional Bulletin In Kannada
# 12.10.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಅದ್ದೂರಿಯಾಗಿ ಸಾಗಿದ ವಿಶ್ವ ವಿಖ್ಯಾತ ಜಂಬೂ ಸವಾರಿ ; ಕಣ್ತುಂಬಿಕೊಂಡ ಲಕ್ಷಾಂತರ ಪ್ರವಾಸಿಗರು

೨. ಕೇಂದ್ರದಿಂದ ತೆರಿಗೆ ತಾರತಮ್ಯ ; ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ

೩. ಚೆನ್ನಪಟ್ಟಣ ವಿಧಾನಸಭೆ ಉಪಚುನಾವಣೆ ; ಕಾರ್ಯಕರ್ತರ ಜೊತೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸಮಾಲೋಚನೆ

೪. ಕಾವೇರಿ ೫ನೇ ಹಂತದ ಕುಡಿಯುವ ನೀರಿನ ಯೋಜನೆಯಿಂದ ಬೆಂಗಳೂರಿನ ೫೦ ಲಕ್ಷ ಜನರಿಗೆ ಅನುಕೂಲ - ಡಿ.ಕೆ. ಶಿವಕುಮಾರ್

೫. ರಾಜ್ಯದ ಹಲವೆಡೆ ಗುಡುಗು ಸಹಿತ ಭಾರೀ ಮಳೆ ನಿರೀಕ್ಷೆ - ಹವಾಮಾನ ಇಲಾಖೆ ಮುನ್ಸೂಚನೆ

**<><*<><>*><>**

ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಜಂಬೂಸವಾರಿ ಮೆರವಣಿಗೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪುಷ್ಪಾರ್ಚನೆ ಮೂಲಕ ಚಾಲನೆ ನೀಡಿದರು. ೫ನೇ ಬಾರಿಗೆ ಅಭಿಮನ್ಯು ಚಾಮುಂಡೇಶ್ವರಿ ದೇವಿಯ ೭೫೦ ಕೆ.ಜಿ. ತೂಕದ ಚಿನ್ನದ ಅಂಬಾರಿ ಹೊತ್ತು ಸಾಗಿದ್ದಾನೆ. ಅಭಿಮನ್ಯು ಎಡಬಲದಲ್ಲಿ ಕುಮ್ಕಿ ಆನೆಗಳಾಗಿ ಹಿರಣ್ಯ ಮತ್ತು ಲಕ್ಷ್ಮಿ ಆನೆಗಳು ಹೆಜ್ಜೆ ಹಾಕಿದವು. ಜಂಬೂ ಸವಾರಿ ಮೆರವಣಿಗೆಯಲ್ಲಿ ನಿಶಾನೆ ಆನೆಯಾಗಿ ಧನಂಜಯ ಹಾಗೂ ನೌಪತ್ ಆನೆಯಾಗಿ ಗೋಪಿ ಹೆಜ್ಜೆ ಹಾಕಿದ್ದಾನೆ. ಅರಮನೆಯಿಂದ ಬನ್ನಿ ಮಂಟಪದವರೆಗೆ ಜಂಬೂ ಸವಾರಿ ಸಾಗಲಿದೆ. ಜಂಬೂಸವಾರಿ ಮೆರವಣಿಗೆಯಲ್ಲಿ ಈ ಬಾರಿ ೫೧ ಸ್ತಬ್ಧಚಿತ್ರಗಳು ಸಾಗಿದವು. ಇದಕ್ಕೂ ಮೊದಲು ನಂದಿಧ್ವಜಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪೂಜೆ ಸಲ್ಲಿಸುವ ಮೂಲಕ ಅಧಿಕೃತ ಚಾಲನೆ ನೀಡಿದರು. ಕೆಲವೇ ಕ್ಷಣಗಳಲ್ಲಿ ನಡೆಯುವ ಪಂಜಿನ ಕವಾಯತಿನಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಗೌರವ ವಂದನೆ ಸ್ವೀಕರಿಸಲಿದ್ದಾರೆ.

**<><*<><>*><>**

ಮೈಸೂರಿನ ಅಂಬಾವಿಲಾಸ ಅರಮನೆಯಲ್ಲಿ ವಿಜಯ ದಶಮಿ ಹಬ್ಬವನ್ನು ಸಡಗರ ಹಾಗೂ ಸಂಭ್ರಮದಿಂದ ವಿಶಿಷ್ಟ ರೀತಿಯಲ್ಲಿ ಆಚರಿಸಲಾಗಿದೆ. ಶವರನ್ನವರಾತ್ರಿಯ ೧೦ನೇ ದಿನವಾದ ಇಂದು ಅಂಬಾವಿಲಾಸ ಅರಮನೆಯ ಕರಿಕಲ್ಲು ತೊಟ್ಟಿಯಲ್ಲಿ ಬೆಳಗ್ಗೆ ಜೆಟ್ಟಿಗಳ ಮುಷ್ಠಿ ಕಾಳಗ ನಡೆಯಿತು. ಬಳಿಕ ರಾಜ ವಂಶಸ್ಥ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಭುವನೇಶ್ವರಿ ದೇವಸ್ಥಾನಕ್ಕೆ ಆಗಮಿಸಿ ಬನ್ನಿ ಮರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ವಿಜಯ ದಶಮಿ ಹಬ್ಬಕ್ಕೆ ಚಾಲನೆ ನೀಡಿದರು.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನವರಾತ್ರಿ ಉತ್ಸವದ ಸಂಭ್ರಮ ಮನೆ ಮಾಡಿದೆ. ಮಂಗಳೂರು ದಸರಾ ಎಂದೇ ಖ್ಯಾತಿ ಪಡೆದ ಕುದ್ರೋಳಿ ಗೋಕರ್ಣನಾಥ ಕ್ಷೇತ್ರದ ನವರಾತ್ರಿ ಉತ್ಸವದ ಹಿನ್ನೆಲೆಯಲ್ಲಿ ನಗರಕ್ಕೆ ಜನಸಾಗರವೇ ಹರಿದು ಬರುತ್ತಿದೆ. ದೇವಾಲಯಗಳಲ್ಲಿ ವಿಜಯದಶಮಿ ಹಿನ್ನೆಲೆಯಲ್ಲಿ ವಿಶೇಷ ಪೂಜೆ ನೆರವೇರಿತು. ದಸರಾ ಹಿನ್ನೆಲೆಯಲ್ಲಿ ಮಂಗಳೂರು ನಗರದ ಪ್ರಮುಖ ರಸ್ತೆಗಳ ಇಕ್ಕೆಲಗಳು ವಿದ್ಯುತ್ ದೀಪಗಳಿಂದ ಅಲಂಕಾರಗೊಂಡು ಹಬ್ಬದ ಕಳೆ ಹೆಚ್ಚಿಸಿದೆ. ನಾಳೆ ವೈಭವದ ಶೋಭಾಯಾತ್ರೆಯ ಮೂಲಕ ೩೩ನೇ ವರ್ಷದ ಮಂಗಳೂರು ದಸರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.

**<><*<><>*><>**

ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಇಂದು ರಾತ್ರಿ ದಸರಾ ಅಂಗವಾಗಿ ದಶ ದೇವಾಲಯಗಳ ವತಿಯಿಂದ ೧೦ ಮಂಟಪಗಳ ಮೆರವಣಿಗೆ ನಡೆಯಲಿದೆ. ಮಂಜಿನ ನಗರಿ ಮಡಿಕೇರಿ, ವಿಜಯದಶಮಿ ಆಚರಣೆಗೆ ಸಿದ್ಧವಾಗಿದೆ. ಈ ಕುರಿತಂತೆ ನಮ್ಮ ಕೊಡುಗು ಪ್ರತಿನಿಧಿ ಅನಿಲ್ ಎಚ್.ಟಿ. ಹೆಚ್ಚಿನ ಮಾಹಿತಿ ನೀಡಿದ್ದಾರೆ.

**<><*<><>*><>**

ನವರಾತ್ರಿಯ ಕೊನೆಯ ದಶಮಿಯ ದಿನವಾದು ಇಂದು ವಿಜಯದಶಮಿ ಹಬ್ಬವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಡಗರ, ಸಂಭ್ರಮದಿಂದ  ಆಚರಿಸಲಾಯಿತು. ದೇವಾಲಯಗಳಲ್ಲಿ ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮಗಳು ನೆರವೇರಿತು. ದೊಡ್ಡಬಳ್ಳಾಪುರ ತಾಲೂಕಿನ ಲಿಂಗನಹಳ್ಳಿಯಲ್ಲಿ ದಸರಾ ಆಚರಣೆ ಅಂಗವಾಗಿ ವಿವಿಧ ಜಾನಪದ ತಂಡಗಳ ಪ್ರದರ್ಶನದೊಂದಿಗೆ ದೇವರ ಉತ್ಸವಗಳನ್ನು ಸಂಭ್ರಮದಿಂದ ಆಚರಿಸಲಾಯಿತು.

**<><*<><>*><>**

ತೆರಿಗೆ ಪಾಲಿನಲ್ಲಿ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ವಿರುದ್ಧದ ಹೋರಾಟಕ್ಕೆ ಕನ್ನಡಿಗರೆಲ್ಲರೂ ದನಿ ಎತ್ತಬೇಕಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಧ್ಯಮ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ೨೮ ರಾಜ್ಯಗಳಿಗೆ ಒಟ್ಟು ೧ ಕೋಟಿ ೭೮ ಲಕ್ಷದ ೧೯೩ ಕೋಟಿ ರೂಪಾಯಿ ಬಿಡುಗಡೆಗೊಳಿಸಿರುವ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ನೀಡಿರುವುದು ಕೇವಲ ೬ ಸಾವಿರದ ೪೯೮ ಕೋಟಿ. ಕೇಂದ್ರ ಸರ್ಕಾರದ ಈ ಅನ್ಯಾಯದ ವಿರುದ್ಧ ಪ್ರತಿಯೊಬ್ಬ ಕನ್ನಡಿಗನು ಹೋರಾಟ ಮಾಡಬೇಕಾಗಿದೆ ಎಂದು ಹೇಳಿದ್ದಾರೆ. ರಾಜ್ಯಗಳಿಂದ ಸಂಗ್ರಹಿಸುವ ತೆರಿಗೆ ಹಣದಲ್ಲಿ ಉತ್ತರಪ್ರದೇಶಕ್ಕೆ ಶೇಕಡ ೧೭.೯೩, ಬಿಹಾರಕ್ಕೆ ಶೇಕಡ ೧೦.೫ ನೀಡಿದರೆ ಕರ್ನಾಟಕ ನೀಡಿದ ತೆರಿಗೆ ಪಾಲು ಕೇವಲ ಶೇಕಡ ೩.೬೪ ಮಾತ್ರ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳೆರಡೂ ಎರಡು ಚಕ್ರಗಳಂತೆ. ಆದರೆ ಕೇಂದ್ರ ಸರ್ಕಾರ ಕರ್ನಾಟಕ ಸೇರಿದಂತೆ ದಕ್ಷಿಣದ ರಾಜ್ಯಗಳಿಗೆ ನಿರಂತರವಾಗಿ ಅನ್ಯಾಯ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

**<><*<><>*><>**

ಮುಂಬರುವ ಚನ್ನಪಟ್ಟಣ ವಿಧಾನಸಭೆ ಉಪ ಚುನಾವಣೆ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಬಿಡದಿಯ ಕೇತಗಾನಹಳ್ಳಿಯಲ್ಲಿ ಕ್ಷೇತ್ರದ ಕಾರ್ಯಕರ್ತರು, ಮುಖಂಡರ ಸಭೆ ಕರೆದು ಸಮಾಲೋಚನೆ ನಡೆಸಿದರು. ಈ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ೫ ಜಿಲ್ಲಾ ಪಂಚಾಯತಿ, ಕ್ಷೇತ್ರ ಹಾಗೂ ಪಟ್ಟಣ ಭಾಗದಲ್ಲಿ ಕಾರ್ಯಕರ್ತರ ಸಭೆ ನಡೆಸಲಾಗಿದೆ ಎಂದು ತಿಳಿಸಿದರು.  ಜೆಡಿಎಸ್- ಬಿಜೆಪಿ ಎರಡು ಪಕ್ಷಗಳು ಹೊಂದಾಣಿಕೆಯಿಂದ ಕೆಲಸ ಮಾಡಬೇಕು. ಮಿತ್ರಪಕ್ಷ ಬಿಜೆಪಿ ನಾಯಕರು, ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಚುನಾವಣೆ ಕಾರ್ಯ ನಿರ್ವಹಿಸಬೇಕು ಎಂದು ಮುಖಂಡರಿಗೆ ನಿರ್ದೇಶನ ನೀಡಿದ್ದೇನೆ ಎಂದು ಹೇಳಿದರು. ನವೆಂಬರ್ ಒಳಗೆ ಮಹಾರಾಷ್ಟ್ರ ಹಾಗೂ ಜಾರ್ಖಂಡ್ ರಾಜ್ಯಗಳ ವಿಧಾನಸಭೆ ಚುನಾವಣೆ ನಡೆಯಲಿದ್ದು, ಅದೇ ಸಮಯದಲ್ಲಿ ಚನ್ನಪಟ್ಟಣ ಉಪ ಚುನಾವಣೆ ನಡೆಯಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಕಾವೇರಿ ೫ನೇ ಹಂತದ ಕುಡಿಯುವ ನೀರಿನ ಯೋಜನೆಗೆ ಇದೇ ೧೬ರಂದು ಚಾಲನೆ ಸಿಗಲಿದ್ದು, ಯೋಜನೆಯಿಂದ ಬೆಂಗಳೂರಿನ ೫೦ ಲಕ್ಷ ಜನರಿಗೆ ಅನುಕೂಲವಾಗಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ.  ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಈವರೆಗೆ ನಾಲ್ಕು ಹಂತಗಳ ಯೋಜನೆಯಲ್ಲಿ ಕುಡಿಯುವ ನೀರನ್ನು ಪೂರೈಸಲಾಗುತ್ತಿತ್ತು. ಈಗ ೫ನೇ ಹಂತದ ಯೋಜನೆ ಜಾರಿಗೊಳ್ಳಲಿದೆ. ಇದೇ ೧೬ ರಂದು ತೊರೆಕಾಡನಹಳ್ಳಿಯಲ್ಲಿ ಯೋಜನೆಗೆ ಚಾಲನೆ ನೀಡಲಾಗುವುದು. ನಂತರ ಬೆಂಗಳೂರಿನ ಮನೆ ಮನೆಗೆ ಕಾವೇರಿ ಪೂರೈಸಲಾಗುವುದು ಎಂದು ಹೇಳಿದರು. ಇದೇ ವೇಳೆ  "ತೆರಿಗೆ ಪಾಲು ಹಂಚಿಕೆಯಲ್ಲಿ ಕರ್ನಾಟಕಕ್ಕೆ ಬಹಳ ಅನ್ಯಾಯ ಮಾಡಲಾಗುತ್ತಿದೆ ಎಂದು ಆರೋಪಿಸಿದರು. ಮುಂದಿನ ದಿನಗಳಲ್ಲಿ "ನಮ್ಮ ತೆರಿಗೆ ನಮ್ಮ ಹಕ್ಕು" ಹೋರಾಟ ಮಾಡಲಾಗುವುದು ಎಂದು ತಿಳಿಸಿದ್ದಾರೆ. ರಾಜ್ಯಕ್ಕೆ ಆಗುತ್ತಿರುವ  ಅನ್ಯಾಯದ ಬಗ್ಗೆ ಕೇಂದ್ರ ಸಚಿವರು ಹಾಗೂ ಬಿಜೆಪಿ ಸಂಸದರು ಧ್ವನಿ ಎತ್ತುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<><>*><>**

ಭಾರತದ ಬಹುತ್ವ ಸಂಸ್ಕೃತಿಯನ್ನು ತಿಳಿಸಿದ ಬುದ್ಧ, ಬಸವ, ಅಂಬೇಡ್ಕರ್, ಸ್ವಾಮಿ ವಿವೇಕಾನಂದ, ಕುವೆಂಪು ಅವರಂತಹ ದಾರ್ಶನಿಕರ ವಿಚಾರಧಾರೆಗಳನ್ನು ಉಳಿಸುವ ಅಗತ್ಯವಿದೆ ಎಂದು ಸಾಹಿತಿ ಡಾ: ಬರಗೂರು ರಾಮಚಂದ್ರಪ್ಪ ಅಭಿಪ್ರಾಯಪಟ್ಟಿದ್ದಾರೆ. ತುಮಕೂರು ದಸರಾ ಉತ್ಸವ ಅಂಗವಾಗಿ ನಗರದ ಗುಬ್ಬಿ ವೀರಣ್ಣ ಕಲಾ ಕ್ಷೇತ್ರದಲ್ಲಿ ನಡೆದ ಸಂವಾದ ಉದ್ಘಾಟಿಸಿ ಮಾತನಾಡಿದ ಅವರು, ಸಂಸ್ಕೃತಿ ಮತ್ತು ಪರಂಪರೆಗಳ ನಡುವಿನ ಸೂಕ್ಷ್ಮ ವ್ಯತ್ಯಾಸಗಳನ್ನು ನಾವು ತಿಳಿದುಕೊಳ್ಳಬೇಕಾಗಿದೆ ಎಂದರು. ಗೃಹ  ಸಚಿವ ಡಾ: ಜಿ. ಪರಮೇಶ್ವರ್ ಮಾತನಾಡಿ, ವಿಶ್ವ ವಿದ್ಯಾನಿಲಯಗಳು ಕೇವಲ ಪದವಿಗಳನ್ನು ನೀಡುತ್ತವೆ. ಆದರೆ

ಭಾರತದ ಸಂಸ್ಕೃತಿ ಬದುಕು ಕಟ್ಟಿಕೊಳ್ಳುವುದನ್ನು ನಾವು ಕಲಿಯಬೇಕಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಭಾರತದ ಮೂಲ ಸಂಸ್ಕೃತಿ ಪರಂಪರೆಯ ಬಗ್ಗೆ ವಚನಕಾರರು, ಸಾಹಿತಿಗಳು, ಚಿಂತಕರು ತಿಳಿಸಿರುವ ಕಾನೂನು ವ್ಯವಸ್ಥೆ, ಅಧುನಿಕ ಯುಗದಲ್ಲಿ ಮಹಿಳೆಯ ಪಾತ್ರ, ಸಮಾನತೆ, ಬಹುತ್ವ ವಿಷಯಗಳ ಕುರಿತು ಚರ್ಚೆ ನಡೆಯಬೇಕಾಗಿದೆ ತಿಳಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದ ದಕ್ಷಿಣ ಹಾಗೂ ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ಬಿರುಸಾಗಿದೆ. ಕರಾವಳಿಯಲ್ಲಿ ಸಾಮಾನ್ಯವಾಗಿತ್ತು. ಉತ್ತರ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಮಳೆಯಾಗಿದೆ. ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ಹಲವು ಕಡೆ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಶಿವಮೊಗ್ಗದ ಪಿಟಿಒ ನಲ್ಲಿ ೧೦ ಸೆಂಟಿ ಮೀಟರ್, ಬೆಳ್ಳೂರು ೯, ಭದ್ರಾವತಿ ೮, ನಾಗಮಂಗಲ, ಹಗರಿಬೊಮ್ಮನಹಳ್ಳಿ, ಯಲಬುರ್ಗಾ, ಕುಕನೂರು, ಇಳಕಲ್, ಕೂಡಲಸಂಗಮ ತಲಾ ೭ ಸೆಂಟಿಮೀಟರ್‌ನಷ್ಟು ಮಳೆಯಾಗಿದೆ. ಮುನ್ಸೂಚನೆಯಂತೆ ಕರಾವಳಿ ಜಿಲ್ಲೆಗಳಾದ ದಕ್ಷಿಣಕನ್ನಡ ಉಡುಪಿ ಹಾಗೂ ಬೆಳಗಾವಿ, ಹಾವೇರಿ, ಧಾರವಾಡ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಗುಡುಗುಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ. ತುಮಕೂರು, ಕೊಡಗು, ಹಾಸನ, ಚಿಕ್ಕಮಗಳೂರು, ಮೈಸೂರು, ಶಿವಮೊಗ್ಗ, ರಾಮನಗರ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಂಭವವಿದೆ. ಉತ್ತರ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರು ಸುತ್ತಮುತ್ತ ಮೋಡ ಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಗರಿಷ್ಠ ೨೯, ಕನಿಷ್ಠ ೨೧ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವವಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**<><*<><>*><>**

ಇನ್ನು ಸಂಕ್ಷಿಪ್ತ ಸುದ್ದಿಗಳು

೧. ಬಯಲು ಸೀಮೆಯ ದಸರಾ ಎಂದೆ ಖ್ಯಾತಿ ಪಡೆದಿರುವ ಚಿತ್ರದುರ್ಗ ಜಿಲ್ಲೆಯ ಮುರುಘ ಮಠದ ಶರಣ ಸಂಸ್ಕೃತಿ ಉತ್ಸವ. ಉತ್ಸವದ ಅಂಗವಾಗಿ ಕಲಾಮೇಳ ಆಯೋಜಿಸಲಾಗಿದೆ. ರಾಜ್ಯದ ಎಲ್ಲಾ ಸಾಂಪ್ರದಾಯಿಕ ಸಾಂಸ್ಕೃತಿಕ ಜಾನಪದ ಮತ್ತು ಬುಡಕಟ್ಟು ತಂಡಗಳು ಈ ಮೇಳದಲ್ಲಿ ಭಾಗವಹಿಸಿವೆ.

೨. ಉಡುಪಿ ಜಿಲ್ಲೆಯಲ್ಲಿ ಜಿ.ಪಿ.ಎಸ್ ಆಧಾರಿತ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯವು ಖಾಸಗಿ ಸಂಸ್ಥೆಗಳ ಮೂಲಕ ಕೈಗೊಳ್ಳಲಾಗುತ್ತಿದೆ. ರೈತರಿಂದ ಸ್ವೀಕೃತವಾದ ಆಕ್ಷೇಪಣೆಗಳನ್ನು ಸಂಬಂಧಿಸಿದ ಗ್ರಾಮದ ಮೇಲ್ವಿಚಾರಕರಿಂದ ಪರಿಶೀಲಿಸಿ ಇತ್ಯರ್ಥಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರ ಕಚೇರಿ ಪ್ರಕಟಣೆ ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**